# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಆರೋಗ್ಯಾಧಿಕಾರಿ (ಸಾರ್ವಜನಿಕ ಆರೋಗ್ಯ) ರವರ ಕಛೇರಿ,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಎನ್.ಆರ್. ಚೌಕ, ಬೆಂಗಳೂರು – 560002.

**ಸಂಖ್ಯೆ: ಮು.ಆ.ಅ(ಸಾ.ಆ)/ಪಿಆರ್/ಪಿ–90/2022–23** **ದಿನಾಂಕ: 03–08–2022**

## ಪ್ರಕಟಣೆ

ಕೇಂದ್ರ ಸರ್ಕಾರದ 15ನೇ ಹಣಕಾಸು ಆಯೋಗದ ಯೋಜನೆಯಡಿಯಲ್ಲಿ ಕರ್ನಾಟಕ ಸರ್ಕಾರದ ಅನುಮೋದನೆಯಂತೆ, ಬಿಬಿಎಂಪಿ ವ್ಯಾಪ್ತಿಯಲ್ಲಿ ಸ್ಥಾಪಿಸಲಾಗುವ **"ನಮ್ಮ ಕ್ಲಿನಿಕ್"** ಗಳಲ್ಲಿ ಕರ್ತವ್ಯ ನಿರ್ವಹಿಸಲು ಈ ಕೆಳಕಂಡ ಹುದ್ದೆಗಳಿಗೆ ಮೆರಿಟ್ ಕಮ್ ರೋಸ್ಟರ್ ಆಧಾರದ ಮೇಲೆ 01 ವರ್ಷದ ಅವಧಿಗೆ ಗುತ್ತಿಗೆ ಆಧಾರದ ಮೇಲೆ ವಾಕ್ ಇನ್ ಆಯ್ಕೆ ಪ್ರಕ್ರಿಯೆ ಮೂಲಕ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ ಸಂ. | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ವಿದ್ಯಾರ್ಹತೆ | ಸಂಚಿತ ವೇತನ ಪ್ರತಿ ಮಾಹೆಯಾನ | ವಾಕ್ ಇನ್ ಆಯ್ಕೆ ಪ್ರಕ್ರಿಯೆ ನಡೆಯುವ ಸ್ಥಳ, ದಿನಾಂಕ ಮತ್ತು ಸಮಯ |
|---|---|---|---|---|---|
| 1 | ವೈದ್ಯಾಧಿಕಾರಿಗಳು | 235 | ಎಂ.ಬಿ.ಬಿ.ಎಸ್. ಪದವಿ ಮತ್ತು ಕೆ.ಎಂ.ಸಿ ಕೌನ್ಸಿಲ್ ನೋಂದಾವಣಿ ಹೊಂದಿರಬೇಕು. | 47,250/- | ನೌಕರರ ಭವನ ಸಭಾಂಗಣ, ಬಿಬಿಎಂಪಿ, ಕೇಂದ್ರ ಕಛೇರಿ, ಎನ್.ಆರ್. ಚೌಕ ದಿನಾಂಕ: 10–08–2022 ಮತ್ತು 11–08–2022ರ ಬೆಳಿಗ್ಗೆ 10.30 ಗಂಟೆಯಿಂದ ಸಂಜೆ 4.30 ಗಂಟೆವರೆಗೆ. |
| 2 | ಶುಶ್ರೂಷಕಿ/ ಶುಶ್ರೂಷಕರು | 235 | ಬಿ.ಎಸ್.ಸಿ / ಡಿಪ್ಲೋಮಾ ಇನ್ ನರ್ಸಿಂಗ್ ಮತ್ತು ಕೆ.ಎಂ.ಸಿ ಕೌನ್ಸಿಲ್ ನೋದಾವಣಿ ಹೊಂದಿರಬೇಕು. | 15,750/- | |
| 3 | ಪ್ರಯೋಗಶಾಲಾ ತಂತ್ರಜ್ಞರು | 235 | ಡಿಪ್ಲೋಮಾ ಇನ್ ಪ್ರಯೋಗಶಾಲಾ ತಂತ್ರಜ್ಞಾನ (ಬಿ.ಎಂ.ಎಲ್.ಟಿ) ಮತ್ತು 1) ಕರ್ನಾಟಕ ಸರ್ಕಾರ ಪ್ಯಾರಾಮೆಡಿಕಲ್ ಮಂಡಳಿಯ ನೋಂದಣಿ ಹೊಂದಿರಬೇಕು. 2) ಗಣಕಯಂತ್ರ ಜ್ಞಾನ ಹೊಂದಿರಬೇಕು. | 14,609/- | |
| 4 | ನಾಲ್ಕನೇ ದರ್ಜೆ ನೌಕರರು | 235 | ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ | 10,500/- | |

**ಅರ್ಹತಾ ಮಾನದಂಡಗಳು:**

1) **ವಯೋಮಿತಿ:** ಅರ್ಜಿ ಸಲ್ಲಿಸುವ ಕೊನೆಯ ದಿನಾಂಕಕ್ಕೆ ಕನಿಷ್ಠ 18 ವರ್ಷಗಳು ತುಂಬಿರಬೇಕು ಹಾಗೂ ಈ ಕೆಳಗೆ ನಮೂದಿಸಿರುವ ವಯೋಮಿತಿಯನ್ನು ಮೀರಿರಬಾರದು.

- ಸಾಮಾನ್ಯ ವರ್ಗ – **35 ವರ್ಷ**
- 2ಎ, 2ಬಿ, 3ಎ, 3ಬಿ – **38 ವರ್ಷ**
- ಪ.ಜಾತಿ, ಪ.ಪಂಗಡ, ವರ್ಗ–1 – **40 ವರ್ಷ**

2) ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.

ಆಸಕ್ತರು ಬಿಬಿಎಂಪಿ ವೆಬ್‌ಸೈಟ್‌ನಲ್ಲಿ ಇರುವ ಅರ್ಜಿ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯೊಂದಿಗೆ ಸಂಬಂಧಿಸಿದ ವಿದ್ಯಾರ್ಹತೆಯ ಮೂಲ ದಾಖಲೆಗಳು, ಒಂದು ಸ್ವಯಂ ದೃಢೀಕೃತ ಜೆರಾಕ್ಸ್ ಪ್ರತಿ ಮತ್ತು 2 ಜೊತೆ ಭಾವಚಿತ್ರದೊಂದಿಗೆ ಮೇಲೆ ಸೂಚಿಸಿರುವ ಸ್ಥಳ ಮತ್ತು ದಿನಾಂಕದಂದು ವಾಕ್ ಇನ್ ಆಯ್ಕೆ ಪ್ರಕ್ರಿಯೆಗೆ ಹಾಜರಾಗಲು ಸೂಚಿಸಲಾಗಿದೆ. ಹೆಚ್ಚಿನ ವಿವರಗಳಿಗಾಗಿ ದೂರವಾಣಿ ಸಂಖ್ಯೆ: **080–22975516**, ಇ–ಮೇಲ್ ಐಡಿ: **choph515@gmail.com** ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವೆಬ್‌ಸೈಟ್: **www.bbmp.gov.in** ನ್ನು ಸಂಪರ್ಕಿಸಲು ಸೂಚಿಸಲಾಗಿದೆ.

ಸಹಿ/–
ಮುಖ್ಯ ಆರೋಗ್ಯಾಧಿಕಾರಿ (ಸಾ.ಆ)

**ಕೋವಿಡ್-19. ಆತಂಕ ಬೇಡ; ಮುನ್ನೆಚ್ಚರಿಕೆ ಇರಲಿ.**

